ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 16/12/2019

# ಆನಂದ್ ಸಿಂಗ್ ಪ್ರಕರಣ ಚಾರ್ಜ್‌ಶೀಟ್ ಸಲ್ಲಿಕೆ

**ಬೆಂಗಳೂರು:** ಶಾಸಕ ಆನಂದ್ ಸಿಂಗ್ ಮೇಲೆ ಕಂಪ್ಲಿ ಶಾಸಕ ಗಣೇಶ್ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಡದಿ ಪೊಲೀಸರು ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ.

ಬಿಡದಿಯ ಈಗಲ್ಟನ್ ರೆಸಾರ್ಟ್‌ನಲ್ಲಿ 2019ರ ಜನವರಿ 16ರಂದು ಕಾಂಗ್ರೆಸ್ ಶಾಸಕರು ಉಳಿದುಕೊಂಡಿದ್ದ ಸಂದರ್ಭದಲ್ಲಿ ಶಾಸಕ ಆನಂದ್ ಸಿಂಗ್ ಮೇಲೆ ಹಲ್ಲೆ ನಡೆಸಿದ ಕಂಪ್ಲಿ ಶಾಸಕ ಗಣೇಶ್ ವಿರುದ್ಧ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ದೋಷಾರೋಪಣ ಪಟ್ಟಿಯನ್ನು ಶನಿವಾರ ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಬಿಡದಿ ಪೊಲೀಸರು ಸಲ್ಲಿಸಿದ್ದ 30 ಪುಟಗಳಿರುವ ಚಾರ್ಜ್‌ಶೀಟ್ ಅನ್ನು ನ್ಯಾಯಾಲಯ ಸ್ವೀಕರಿಸಿದ್ದು, ಸದ್ಯದಲ್ಲಿಯೇ ವಿಚಾರಣೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ, ರಾಜ್ಯದಲ್ಲಿ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರಕಾರ ರಚನೆ ಸಂಬಂಧ ನಡೆದಿದ್ದ ರಾಜಕೀಯ ಬೆಳವಣಿಗೆಯ ನಡುವೆ ತಮ್ಮ ಶಾಸಕರನ್ನು ಹಿಡಿದಿಟ್ಟುಕೊಳ್ಳಲು ಕಾಂಗ್ರೆಸ್ ನಾಯಕರು ತಮ್ಮ ಶಾಸಕರನ್ನು ಬಿಡದಿಯ ಈಗಲ್ಟನ್ ರೆಸಾರ್ಟ್‌ನಲ್ಲಿ ಇರಿಸಿದ್ದರು. 2019ರ ಜನವರಿ 16ರಂದು ಶಾಸಕ ಗಣೇಶ್ ಅವರು ಆನಂದ್ ಸಿಂಗ್ ಮೇಲೆ ಬಾಟಲಿನಿಂದ ಹಲ್ಲೆ ನಡೆಸಿದ್ದರು. ಈ ವೇಳೆ ಗಂಭೀರವಾಗಿ ಗಾಯಗೊಂಡಿದ್ದ ಆನಂದ್ ಸಿಂಗ್ ಅವರು ಆಸ್ಪತ್ರೆಯಲ್ಲಿ ಐಸಿಯುನಲ್ಲಿ ಚಿಕಿತ್ಸೆ ಪಡೆದಿದ್ದರು. ಈ ವೇಳೆ ಆನಂದ್ ಸಿಂಗ್ ಅವರ ಪತ್ನಿ, ಶಾಸಕ ಗಣೇಶ್ ವಿರುದ್ಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು.